# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ (ನೈರುತ್ಯ ಶಿಕ್ಷಕರ ಕ್ಷೇತ್ರ) ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ

* * * * * * * * *

## ವಿಷಯ

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ಭರ್ತಿ ಮಾಡಲು ಕಾಲೇಜು ಶಿಕ್ಷಣ ಇಲಾಖೆ ನಿರ್ಧರಿಸಿದ್ದು, ಇದು ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ (ಯುಜಿಸಿ) ನೇಮಕಾತಿ ನಿಯಮ ಸ್ಪಷ್ಟ ಉಲ್ಲಂಘನೆ ಆಗಿರುತ್ತದೆ. 2018ರ ಯುಜಿಸಿ ನಿಯಮಾವಳಿಯಲ್ಲಿ ಈ ರೀತಿಯ ನೇಮಕಾತಿ ಮಾಡಬೇಕು ಎಂದು ಎಲ್ಲಿಯೂ ಹೇಳಿರುವುದಿಲ್ಲ. ಪ್ರಾಂಶುಪಾಲರಿಗೆ ಸಂಬಂಧಿಸಿದಂತೆ ಮಾತ್ರವಲ್ಲ. ಎಲ್ಲಾ ಹುದ್ದೆಗಳ ನೇಮಕಾತಿ ಮತ್ತು ಆಯ್ಕೆ ಸಂದರ್ಭದಲ್ಲೂ ನೇರ ನೇಮಕಾತಿ ವಿಧಾನ ಅನುಸರಿಸಬೇಕು ಎಂದು ಯುಜಿಸಿ ನಿಯಮದಲ್ಲಿ ಉಲ್ಲೇಖವಿದೆ. ಅದರಂತೆ ನಿಯಮ 4.0.5 ರಲ್ಲಿ ಕಾಲೇಜು ಪ್ರಾಂಶುಪಾಲರು ಮತ್ತು ಪ್ರಾಧ್ಯಾಪಕರ (ಪ್ರೊಫೆಸರ್) ಎರಡೂ ಹುದ್ದೆಗಳ ನೇಮಕದ ಬಗ್ಗೆ ಒಟ್ಟಿಗೆ ಪ್ರಸ್ತಾಪಿಸಲಾಗಿದೆ. ನಿರ್ದಿಷ್ಟ ಸಮಿತಿ ರಚಿಸಿ, ಪ್ರಾಧ್ಯಾಪಕರ ಕಾರ್ಯಕ್ಷಮತೆ ಪರಿಶೀಲಿಸಿ ಬಡ್ತಿ ಮೂಲಕ ಆಯ್ಕೆ ನಡೆಸಬೇಕೆಂದು ಅದು ಹೇಳುತ್ತದೆ. ನಿಯಮ 5.1.8 ಮತ್ತು 6.0 ಗಳಲ್ಲಿ ಆಯ್ಕೆ ಕ್ರಮ ಮತ್ತು ಮಾನದಂಡಗಳನ್ನು ವಿವರಿಸಲಾಗಿದೆ. ಆದರೆ, ಪ್ರಾಂಶುಪಾಲರನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ, ಹೊರಗಿನವರಿಗೂ ಅವಕಾಶ ನೀಡಿ ನೇಮಿಸಬೇಕು ಎಂದು ಎಲ್ಲಿಯೂ ಹೇಳಿಲ್ಲ. ಇದು ಮಾತ್ರವಲ್ಲದೇ, ಯುಜಿಸಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗೆ ಎಲ್ಲಿಯೂ ಪ್ರತ್ಯೇಕ ಕೇಡರ್ ಇಲ್ಲವೇ ವೇತನ ಶ್ರೇಣಿಯ (ಪೇ ಸ್ಕೇಲ್) ಪ್ರಸ್ತಾಪವಿಲ್ಲ. ಪ್ರಾಧ್ಯಾಪಕರ ಹುದ್ದೆಗೆ ಸರಿಸಮಾನವಾದ ಹುದ್ದೆಗಾಗಿ ಪ್ರಾಂಶುಪಾಲರ ಹುದ್ದೆಗಳನ್ನು ಕಲ್ಪಿಸಿಕೊಳ್ಳಲಾಗಿದ್ದು, ಸಹ ಪ್ರಾಧ್ಯಾಪಕರನ್ನು ಪ್ರಾಂಶುಪಾಲರ ಹುದ್ದೆಗೆ (ಪ್ರಾಧ್ಯಾಪಕರ ಸಮಾನ ಗ್ರೇಡ್ ನೀಡಿ) ಬಡ್ತಿ ಮೂಲಕ ನೇಮಿಸಬಹುದು ಎಂದು ಹೇಳಿದೆ. ಹಾಗಿದ್ದಾಗ್ಯೂ, ಕಾಲೇಜು ಇಲಾಖೆಯು 2018ರ ಯುಜಿಸಿ ನಿಯಮಾವಳಿಯನ್ನು ಅಲಕ್ಷಿಸಿ 2008-09ರ ವೃಂದ ಮತ್ತು ನೇಮಕಾತಿ (ಸಿ ಆಂಡ್ ಆರ್) ನಿಯಮಗಳನ್ನೇ ಅನುಸರಿಸಿ ಪ್ರಾಂಶುಪಾಲರ ವಿಶೇಷ ನೇರ ನೇಮಕಾತಿ ರೂಪಿಸಿದೆ. ಕೇಂದ್ರ ಸರ್ಕಾರವು ಹೊಸದಾಗಿ ರೂಪಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನೇ (ಎನ್‌ಇಪಿ) ನಮ್ಮ ರಾಜ್ಯ ಸರ್ಕಾರ ಬದಲಿಸುತ್ತಿದೆ. ಹೀಗಿರುವಾಗ ತಪ್ಪಾದ ನೇಮಕಾತಿ ನೀತಿಯನ್ನು ರದ್ದು ಮಾಡಲು ಇಚ್ಛಾಶಕ್ತಿ ಬೇಕಷ್ಟೆ. ಈಗ ನಿಯಮಗಳನ್ನು ರದ್ದು ಮಾಡಿದರೆ ಕಾನೂನು ತೊಡಕು ಉಂಟಾಗಬಹುದು ಎಂಬ ಮಾತು ಕೇವಲ ಸಮರ್ಥನೆಯಷ್ಟೆ. ಸರ್ಕಾರವು ವಿದ್ಯಾರ್ಥಿಗಳ ಮತ್ತು ಶಿಕ್ಷಣದ ಗುಣಮಟ್ಟದ ದೃಷ್ಟಿಯಿಂದ ಈ ನೇಮಕಾತಿಯನ್ನು ಕೂಡಲೇ ರದ್ದುಗೊಳಿಸಿ, ಪ್ರಾಧ್ಯಾಪಕರ ಬಡ್ತಿ ಮೂಲಕ ಪ್ರಾಂಶುಪಾಲರ ಹುದ್ದೆಗಳನ್ನು ತುಂಬುವುದೇ ಸರಿಯಾದ ಮಾರ್ಗ. ಇದಕ್ಕೆ ಬೇಕಾದ ವೃಂದ ಮತ್ತು ನೇಮಕಾತಿ ನಿಯಮಕ್ಕೆ ತಿದ್ದುಪಡಿ ತರುವುದು ಅಗತ್ಯವಿದೆ. ಆದ್ದರಿಂದ ಈ ಸಂಬಂಧ ಶೂನ್ಯವೇಳೆಯಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರ ಬಳಿ ಪ್ರಸ್ತಾಪಿಸಬಯಸುತ್ತೇನೆ.

* * * * * * *

## ಉತ್ತರ

- ಕಾಲೇಜು ಶಿಕ್ಷಣ ಇಲಾಖೆಯ ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/91/ಡಿಸಿಇ/2004, ದಿನಾಂಕ:25.09.2009 ರಲ್ಲಿ ಜಾರಿಗೊಳಿಸಿರುವ ಕಾಲೇಜು ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ.

• ಅದರಂತೆ, ಪ್ರಸ್ತುತ ಜಾರಿಯಲ್ಲಿರುವ 2018 ರ ಯು.ಜಿ.ಸಿ. ನಿಯಮಗಳ ಕಂಡಿಕೆ 4.0, 4.1.V ರಲ್ಲಿ ಕಾಲೇಜು ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಸದರಿ ಹುದ್ದೆಗೆ ನಿಗಧಿಪಡಿಸಿರುವ ಅರ್ಹತೆ ಹಾಗೂ ಮಾನದಂಡಗಳು ಈ ಕೆಳಗಿನಂತಿದೆ;

**4.0 Direct Recruitment**
**4.1 For the Disciplines of Arts, Commerce, Humanities, Education, Law, Social Sciences, Sciences, Languages, Library Science, Physical Education, and Journalism & Mass Communication.**

**V. College Principal and Professor (Professor's Grade)**

**A. Eligibility:**

i. Ph.D. degree
ii. Professor/Associate Professor with a total service/ experience of at least fifteen years of teaching/research in Universities, Colleges and other institutions of higher education.
iii. A minimum of 10 research publications in peer-reviewed or UGC-listed journals.
iv. A minimum of 110 Research Score as per Appendix II, Table 2

**B. Tenure**

i. A College Principal shall be appointed for a period of five years, extendable for another term of five years on the basis of performance assessment by a Committee appointed by the University, constituted as per these regulations.

ii. After the completion of his/her term as Principal, the incumbent shall join back his/her parent organization with the designation as Professor and in the grade of the Professor.

• ಮುಂದುವರೆದು, 2018 ರ ಯು.ಜಿ.ಸಿ. ನಿಯಮಗಳ ಕಂಡಿಕೆ 4.0, 4.1. V (A)(B) ರಲ್ಲಿ ಕಾಲೇಜು ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ಮಾನದಂಡಗಳನ್ನು ನಿಗಧಿಪಡಿಸಲಾಗಿದೆ. ಯು.ಜಿ.ಸಿ.ಯ ಸದರಿ ಕಂಡಿಕೆಗಳ ಉದ್ಧೃತ ಭಾಗವನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ.

• ಕಾಲೇಜು ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು 2018 ರ ಯು.ಜಿ.ಸಿ. ನಿಯಮಗಳಲ್ಲಿ ಸ್ಪಷ್ಟವಾಗಿ ತಿಳಿಸಿದ್ದು, ಪ್ರಾಂಶುಪಾಲರ ಹುದ್ದೆಗೆ ಅರ್ಹತೆ ಸಂಬಂಧ 2018 ರ ಯು.ಜಿ.ಸಿ. ನಿಯಮಗಳ ಕಂಡಿಕೆ 4.0, 4.1. V. A(ii) ರಲ್ಲಿ "Professor/Associate Professor with a total service/ experience of at least fifteen years of teaching/research in Universities, Colleges and other institutions of higher education." ಎಂದಿರುವುದರಿಂದ ರಾಜ್ಯ ಸರ್ಕಾರದ ಕಾರ್ಯನೀತಿಯಂತೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ, ಆ ಮೂಲಕ ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ನೇಮಕಾತಿ ಪ್ರಕ್ರಿಯೆ ನಡೆಸಲು ಉದ್ದೇಶಿಸಲಾಗಿದೆ.

- 2018 ರ ಯು.ಜಿ.ಸಿ. ನಿಯಮಗಳಲ್ಲಿ ಪ್ರಾಂಶುಪಾಲರ (College Principal) ಹುದ್ದೆಯನ್ನು ಪ್ರಾಧ್ಯಾಪಕರ (Professor) ಸರಿಸಮಾನವಾದ ಹುದ್ದೆ ಎಂದು ತಿಳಿಸಲಾಗಿದ್ದಾಗ್ಯೂ, ಸಹ ಪ್ರಾಧ್ಯಾಪಕರನ್ನು ಪ್ರಾಂಶುಪಾಲರ ಹುದ್ದೆಗೆ (ಪ್ರಾಧ್ಯಾಪಕರ ಸಮಾನ ಗ್ರೇಡ್ ನೀಡಿ) ಬಡ್ತಿ ಮೂಲಕ ನೇಮಿಸಲು ಅವಕಾಶ ಕಲ್ಪಿಸಿರುವುದಿಲ್ಲ. ಆದರೆ 2018 ರ ಯು.ಜಿ.ಸಿ. ನಿಯಮಗಳಲ್ಲಿ ಕಂಡಿಕೆ 6.4(B) ರಲ್ಲಿ ಸಹಾಯಕ ಪ್ರಾಧ್ಯಾಪಕರಿಗೆ 4 ಹಂತಗಳ ಸ್ಥಾನೀಕರಣಕ್ಕೆ (CAS-Career Advancement Scheme) ಮಾತ್ರ ಅವಕಾಶ ಕಲ್ಪಿಸಲಾಗಿದ್ದು, ಅವುಗಳು ಈ ಕೆಳಗಿನಂತಿವೆ;

**6.4(B). Career Advancement Scheme (CAS) for Colleges teachers;**

I. Assistant Professor (Academic Level 10) to Assistant Professor (Senior Scale/ Academic Level 11)
II. Assistant Professor (Senior Scale/Academic Level 11) to Assistant Professor (Selection Grade/Academic Level 12)
III. Assistant Professor (Selection Grade/Academic Level 12) to Associate Professor (Academic Level 13A)
IV. Associate Professor (Academic Level 13A) to Professor (Academic Level 14)

- ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಯು.ಜಿ.ಸಿ. ವೇತನ ಶ್ರೇಣಿಗಳನ್ನು ದಿನಾಂಕ:01.01.1986 ರಿಂದ ಪೂರ್ವಾನ್ವಯವಾಗಿ ಜಾರಿಗೆ ತರಲಾಗಿದ್ದು, ಈ ಹಿನ್ನೆಲೆಯಲ್ಲಿ ಬೋಧಕರ ನೇಮಕಾತಿಗಳಲ್ಲಿ ಯು.ಜಿ.ಸಿ ಯು ಕಾಲ ಕಾಲಕ್ಕೆ ನಿಗಧಿಪಡಿಸುವ ಮಾನದಂಡಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕಾಗಿರುತ್ತದೆ.

- ಅದರಂತೆ, ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಮೇಲೆ ವಿವರಿಸಿದ 2018 ರ ಯು.ಜಿ.ಸಿ. ನಿಯಮಗಳನ್ನು ಅಳವಡಿಸಿಕೊಂಡು ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು 2020 ನ್ನು ರೂಪಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:09.09.2020 ರಲ್ಲಿ ಮತ್ತು ತಿದ್ದುಪಡಿ ನಿಯಮಗಳು 2022 ನ್ನು ದಿನಾಂಕ:21.03.2022 ರಲ್ಲಿ ಪ್ರಕಟಿಸಲಾಗಿದೆ. 2018 ರ ಯು.ಜಿ.ಸಿ. ನಿಯಮಗಳನ್ನು ವಿಶೇಷ ನಿಯಮಗಳಲ್ಲಿ ಅಳವಡಿಸಿಕೊಂಡು ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿರುವುದರಿಂದ ಪ್ರಾಂಶುಪಾಲರ ನೇಮಕಾತಿಯಲ್ಲಿ ಯು.ಜಿ.ಸಿ. ನಿಯಮಗಳ ಉಲ್ಲಂಘನೆ ಆಗಿರುವುದಿಲ್ಲ.

- ಸರ್ಕಾರದಿಂದ ಮಂಜೂರಾದ ಒಟ್ಟು 412 ಪ್ರಾಂಶುಪಾಲರ ಹುದ್ದೆಗಳಲ್ಲಿ 310 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಇಡಿ/121/ಡಿಸಿಇ/ 2018, ದಿನಾಂಕ:11.06.2019 ರಲ್ಲಿ ಅನುಮತಿ ನೀಡಲಾಗಿರುತ್ತದೆ. ಅದರಂತೆ 310 ಪ್ರಾಂಶುಪಾಲರು ಯು.ಜಿ. (ಗ್ರೇಡ್-I) ಹುದ್ದೆಗಳನ್ನು ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು 2020 ಮತ್ತು ತಿದ್ದುಪಡಿ ನಿಯಮಗಳು 2022 ರನ್ವಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, 310 ಪ್ರಾಂಶುಪಾಲರ ಹುದ್ದೆಗಳಿಗೆ ನಿಯಮಾನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಅಂತಿಮ ಆಯ್ಕೆ ಪಟ್ಟಿಯನ್ನು ಸಲ್ಲಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ ಡಿಸಿಇ/2018, ದಿ:21.03.2022 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿರುತ್ತದೆ.

* ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈಗಾಗಲೇ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿದ್ದು, ಆಯ್ಕೆಗೊಂಡ ಅಭ್ಯರ್ಥಿಗಳ ಅಂತಿಮ ಮೆರಿಟ್ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸ್ವೀಕೃತವಾಗಿರುವ 141 ಸ್ಥಳೀಯ ವೃಂದದ (ಕ.ಕ) ಹಾಗೂ 813 ಉಳಿಕೆ ಮೂಲ ವೃಂದದ (ನಾನ್ ಹೆಚ್.ಕೆ) ಮೆರಿಟ್ ಪಟ್ಟಿಯನ್ನು ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು 2020 ರ ನಿಯಮ 4 ರನ್ವಯ ಕಾಲೇಜು ಶಿಕ್ಷಣ ಆಯುಕ್ತರ ಅಧ್ಯಕ್ಷತೆಯಲ್ಲಿನ ಆಯ್ಕೆ ಪ್ರಾಧಿಕಾರವು ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ಶೈಕ್ಷಣಿಕ / ಮೀಸಲಾತಿ ದಾಖಲಾತಿಗಳನ್ನು ಪರಿಶೀಲಿಸಿ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ: ಇಡಿ 93 ಡಿಸಿಇ 2024(ಇ), ದಿನಾಂಕ:13.03.2024 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರಿಗೆ ಸೂಚಿಸಲಾಗಿದ್ದು, ಅದರಂತೆ ಪರಿಶೀಲನಾ ಪ್ರಕ್ರಿಯೆ ನಡೆಸಲು ಕ್ರಮವಹಿಸಲಾಗುತ್ತಿದೆ.

* ಕಾಲೇಜು ಶಿಕ್ಷಣ ಇಲಾಖೆಯ ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸಂಬಂದಿಸಿದಂತೆ, ಈಗಾಗಲೇ 2018 ರ ಯು.ಜಿ.ಸಿ. ನಿಯಮಗಳನ್ನು ಅಳವಡಿಸಿಕೊಂಡು ಸರ್ಕಾರವು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ, ಅದರಡಿಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ, ಅಭ್ಯರ್ಥಿಗಳ ಮೆರಿಟ್ ಲಿಸ್ಟ್ ಸಿದ್ಧಪಡಿಸಿ ಪ್ರಕಟಿಸಲಾಗಿದೆ. ಅದರಂತೆ ಪ್ರಾಂಶುಪಾಲರ ಆಯ್ಕೆ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

**ಇಡಿ 190 ಡಿಸಿಇ 2024 (ಇ)**

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

ಡಾ.ಎಂ.ಸಿ ಸುಧಾಕರ್ ಎಂ.ಡಿ.ಎಸ್
ಉನ್ನತ ಶಿಕ್ಷಣ ಸಚಿವರು